# ಕನ್ನಡ ವಿಶ್ವವಿದ್ಯಾಲಯ, ಹಂಪಿ

## ದೂರಶಿಕ್ಷಣ ನಿರ್ದೇಶನಾಲಯ

ವಿದ್ಯಾರಣ್ಯ 583 276, ಹೊಸಪೇಟೆ ತಾಲೂಕು, ಬಳ್ಳಾರಿ ಜಿಲ್ಲೆ
ದೂರವಾಣಿ: 8792219968, ಇ-ಮೇಲ್ : dde.kuh@gmail.com


**ನಿರ್ದೇಶಕರು**

ಸಂಖ್ಯೆ:ಕವಿಹಂ:ದೂಶಿನಿ:17:ಪತ್ರ:2020-21 ದಿನಾಂಕ: 28.01.2021

## ವಿದ್ಯಾರ್ಥಿಗಳ ಗಮನಕ್ಕೆ

**ವಿಷಯ: 2020-21ನೇ ಸಾಲಿನ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸುವ ಕುರಿತು.**

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದೂರಶಿಕ್ಷಣ ನಿರ್ದೇಶನಾಲಯವು ನಡೆಸುತ್ತಿರುವ ಸ್ನಾತಕೋತ್ತರ ಮತ್ತು ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಪಡೆದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಎಸ್‌ಎಸ್‌ಪಿ ತಂತ್ರಾಂಶದ ಮೂಲಕ ಶಿಷ್ಯವೇತನ/ಶುಲ್ಕಮರುಪಾವತಿ ಕೋರಿ ಅರ್ಜಿ ಸಲ್ಲಿಸಲು ದಿನಾಂಕ 15.03.2021 ಕೊನೆಯ ದಿನವಾಗಿರುತ್ತದೆ.

**ವಿದ್ಯಾರ್ಥಿಗಳು ಗಮನಿಸಬೇಕಾದ ವಿಷಯಗಳು.**

(1) ನೋಂದಣಿ (ಒಮ್ಮೆ ಮಾತ್ರ) ಈ ಹಿಂದಿನ ವರ್ಷದಲ್ಲಿ ಎಸ್‌ಎಸ್‌ಪಿ ಮೂಲಕ ವಿದ್ಯಾರ್ಥಿ ವೇತನ ಪಡೆದಿದ್ದಲ್ಲಿ ನೋಂದಣಿ ಪ್ರಕ್ರಿಯೆ ಅಗತ್ಯವಿಲ್ಲ.

(2) ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಲಾಗಿನ್ ಆಗಿ ಇ-ದೃಢೀಕರಣ ಹಂತದವರೆಗೆ ಅರ್ಜಿಯನ್ನು ಸಲ್ಲಿಸಬೇಕು.

(3) ಕಾಲೇಜಿನ (ವಿಶ್ವವಿದ್ಯಾಲಯ) ಇ-ದೃಢೀಕರಣ ಅಧಿಕಾರಿಗಳಿಂದ ತಮ್ಮ ದಾಖಲೆಗಳನ್ನು ಇ-ದೃಢೀಕರಣ ಮಾಡಿ ಇ-ದೃಢೀಕರಣ ಐಡಿಯನ್ನು ಪಡೆಯಬೇಕು.

(4) ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಲಾಗಿ ಆಗಿ ಇ-ದೃಢೀಕರಣ ಐಡಿಗಳನ್ನು ನಮೂದಿಸಿ ಮತ್ತು ಅರ್ಜಿ ಸಲ್ಲಿಕೆಯ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು.

(5) ನಿಮ್ಮ ಆಧಾರ ಸಂಖ್ಯೆಯನ್ನು ಬ್ಯಾಂಕ್‌ನ ಖಾತೆಯೊಂದಿಗೆ ಎನ್‌ಪಿಸಿಐಗೆ ಜೋಡಣೆ ಮಾಡಿಕೊಳ್ಳಬೇಕು.

(6) ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 15.03.2021.

ಹೆಚ್ಚಿನ ಮಾಹಿತಿಗಾಗಿ ಎಸ್‌ಎಸ್‌ಪಿ ತಂತ್ರಾಂಶದ ಸಹಾಯವಾಣಿ ಅಥವಾ ದೂರಶಿಕ್ಷಣ ನಿರ್ದೇಶನಾಲಯದ ಇ-ದೃಢೀಕರಣ ಅಧಿಕಾರಿಗಳ ಮೊಬೈಲ್ ಸಂಖ್ಯೆ 8792219968ಗೆ ಸಂಪರ್ಕಿಸಬಹುದು.

28.1.21

**ನಿರ್ದೇಶಕರು**
ದೂರಶಿಕ್ಷಣ ನಿರ್ದೇಶನಾಲಯ

E:dde:Scholar/Finance letter/25